ಕರ್ನಾಟಕ ಸರ್ಕಾರ

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ

ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

ಸಂಖ್ಯೆ : ವಾಇ : ಉ ನಿ : ಸುಮಪ : 2017–18 ದಿನಾಂಕ: 01–11–2017

# ಮಾಧ್ಯಮ ಸಂಸ್ಥೆಗಳ ಮುಖ್ಯಸ್ಥರ ಗಮನಕ್ಕೆ

ಬೆಳಗಾವಿಯಲ್ಲಿ ನವೆಂಬರ್ 13 ರಿಂದ ನಡೆಯಲಿರುವ ವಿಧಾನ ಮಂಡಲದ ಅಧಿವೇಶನ ವರದಿ ಮಾಡಲು ಬೆಂಗಳೂರಿನಿಂದ ನಿಯೋಜಿಸುವ ರಾಜ್ಯಮಟ್ಟದ ಸುದ್ದಿ ವಾಹಿನಿಗಳು ಹಾಗೂ ದಿನ ಪತ್ರಿಕೆಗಳ ಮಾನ್ಯತೆ ಪಡೆದ ಪತ್ರಕರ್ತರು ಹೆಸರುಗಳನ್ನು ವಾರ್ತಾ ಇಲಾಖೆಯ ಸುದ್ದಿ ಮತ್ತು ಪತ್ರಿಕಾ ಶಾಖೆಯಲ್ಲಿ ಶ್ರೀ ಜಡಿಯಪ್ಪ ಗೆದ್ಲಗಟ್ಟಿ ಅವರ ಬಳಿ ನೋಂದಾಯಿಸಲು ಕೋರಿದೆ. ನೋಂದಾಯಿಸಿದ ಮಾಧ್ಯಮ ಪ್ರತಿನಿಧಿಗಳಿಗೆ ಬೆಳಗಾವಿ ಜಿಲ್ಲಾಡಳಿತವು ಒದಗಿಸುವ ಹೋಟೆಲ್ ಕೊಠಡಿಗಳನ್ನು ನೀಡಲಾಗುವುದು.

- ವಸತಿ ಸೌಲಭ್ಯವು ಕಡಿಮೆ ಇರುವ ಕಾರಣ ವಿದ್ಯುನ್ಮಾನ ಮಾಧ್ಯಮದ 6 ಪ್ರತಿನಿಧಿಗಳಿಗೆ(ವರದಿಗಾರರು, ಕ್ಯಾಮರಾಮನ್‌ಗಳು ಹಾಗೂ ತಾಂತ್ರಿಕ ಸಿಬ್ಬಂದಿ ಸೇರಿದಂತೆ) 3 ಡಬ್ಬಲ್ ರೂಂಗಳನ್ನು ಒದಗಿಸಲಾಗುವುದು.
- ಮುದ್ರಣ ಮಾಧ್ಯಮದ 4 ಪ್ರತಿನಿಧಿಗಳಿಗೆ 2 ಡಬ್ಬಲ್ ರೂಂಗಳನ್ನು ಒದಗಿಸಲಾಗುವುದು.
- ಬೆಳಗಾವಿಯ ವರದಿಗಾರರನ್ನು ಹೊರತುಪಡಿಸಿ ಇತರೆ ಜಿಲ್ಲೆಗಳ ಮಾನ್ಯತೆ ಪಡೆದ ಪತ್ರಕರ್ತರನ್ನು ನಿಯೋಜಿಸಿದಲ್ಲಿ ಪತ್ರಕರ್ತರು ಸೇರಿದಂತೆ ಮೇಲೆ ತಿಳಿಸಿದ ಸಂಖ್ಯೆಗೆ ಸೀಮಿತಗೊಳಿಸಲು ಕೋರಿದೆ.
- ತಾಂತ್ರಿಕ ಸಿಬ್ಬಂದಿ ಹಾಗೂ ಓ.ಬಿ. ವಾಹನಗಳ ಪ್ರವೇಶ ಪತ್ರಗಳನ್ನು ಪಡೆಯುವುದು ಆಯಾ ಸಂಸ್ಥೆಯದ್ದೇ ಜವಾಬ್ದಾರಿಯಾಗಿರುತ್ತದೆ.
- ಬೆಳಗಾವಿ ಹೊರತುಪಡಿಸಿ ಇತರೆ ಜಿಲ್ಲೆಗಳಿಂದ ಆಗಮಿಸುವ ಪತ್ರಕರ್ತರಿಗೆ ವಿಧಾನಸಭೆ/ವಿಧಾನ ಪರಿಷತ್ತಿನ ಪ್ರವೇಶ ಪತ್ರಗಳ ಅಗತ್ಯವಿದ್ದಲ್ಲಿ ಈ ಕಛೇರಿಗೆ ಪ್ರತ್ಯೇಕ ಮನವಿ ಸಲ್ಲಿಸಲು ಕೋರಿದೆ.
- ಬೆಂಗಳೂರಿನ ಪತ್ರಕರ್ತರಿಗೆ ಈಗಾಗಲೇ ನೀಡಿರುವ 2017 ರ ಡಿಸೆಂಬರ್ ಅವಧಿ ಇರುವ ಪ್ರವೇಶಪತ್ರವೇ ಅನ್ವಯವಾಗುತ್ತದೆ.
- ವಸತಿಗಾಗಿ ಹೆಸರು ನೋಂದಾಯಿಸಲು 2017 ನವೆಂಬರ್ 2 ಕೊನೆಯ ದಿನ. ವಸತಿ ಸೌಲಭ್ಯ ಕಲ್ಪಿಸಲು ಪೂರ್ವಸಿದ್ದತೆ ಅಗತ್ಯವಿರುವುದರಿಂದ ಕೊನೆಯ ದಿನಾಂಕದ ನಂತರ ಬಂದ ಮನವಿಗಳನ್ನು ಸ್ವೀಕರಿಸಲಾಗುವುದಿಲ್ಲ.
- ಸಂಸ್ಥೆಯ ಮುಖ್ಯಸ್ಥರು ಅಧಿವೇಶನದಲ್ಲಿ ಭಾಗವಹಿಸುವ ಪತ್ರಕರ್ತರ ಹೆಸರು, ಹುದ್ದೆ, ದೂರವಾಣಿ ಸಂಖ್ಯೆ ಮೊದಲಾದ ವಿವರಗಳನ್ನು ನಮೂದಿಸಿ ಶಿಫಾರಸ್ಸು ಪತ್ರವನ್ನು ಸುದ್ದಿ ಮತ್ತು ಪತ್ರಿಕಾ ಶಾಖೆಗೆ ಕಳುಹಿಸಲು ಕೋರಿದೆ.
- ಹೆಚ್ಚಿನ ಮಾಹಿತಿಗೆ ಶ್ರೀ ಜಡಿಯಪ್ಪ ಗೆದ್ಲಗಟ್ಟಿ (22028011) ಇವರನ್ನು ಸಂಪರ್ಕಿಸಬಹುದು.

(ಡಾ. ಹರ್ಷ ಪಿ.ಎಸ್.)

ನಿರ್ದೇಶಕರು

# ಪತ್ರಿಕಾ ಅಮಂತ್ರಣ

## ಬೆಂಗಳೂರು ಗ್ರಾಮಾಂತರ ಜಿಲ್ಲಾ
## ವಿಷನ್ 2025 ಡಾಕ್ಯುಮೆಂಟ್ ಕಾರ್ಯಾಗಾರ

ಉದ್ಘಾಟನೆ : ಶ್ರೀ ಕೃಷ್ಣ ಭೈರೇಗೌಡರು
ಕೃಷಿ ಹಾಗೂ ಬೆಂಗಳೂರು ಗ್ರಾಮಾಂತರ
ಜಿಲ್ಲಾ ಉಸ್ತುವಾರಿ ಸಚಿವರು

ಮುಖ್ಯ ಅತಿಥಿಗಳು : ಡಾ|| ಎಂ.ವೀರಪ್ಪ ಮೊಯ್ಲಿ
ಸಂಸದರು, ಚಿಕ್ಕಬಳ್ಳಾಪುರ ಲೋಕಸಭಾ ಕ್ಷೇತ್ರ

ಶ್ರೀಮತಿ ರೇಣುಕಾ ಚಿದಂಬರಂ
ಪ್ರಧಾನ ಕಾರ್ಯದರ್ಶಿಗಳು, ಸಾರ್ವಜನಿಕ
ಉದ್ಯಮಿಗಳ ಇಲಾಖೆ ಹಾಗೂ
ಆಯುಕ್ತರು ವಿಷನ್ 2025 ಡಾಕ್ಯುಮೆಂಟ್ ಯೋಜನೆ.

ದಿನಾಂಕ : 02-11-2017
ಸಮಯ : ಬೆಳಗ್ಗೆ 10-30 ಗಂಟೆಗೆ.

ಸ್ಥಳ : ಡಾ|| ಆರ್.ರಾಜೇಂದ್ರ ಪ್ರಸಾದ್ ಅಂತರಾಷ್ಟೀಯ ಕನ್‌ವೆನ್‌ಷನಲ್ ಸೆಂಟರ್, ಜಿಕೆವಿಕೆ ಕ್ಯಾಪಂಸ್, ಹೆಬ್ಬಾಳ, ಬೆಂಗಳೂರು.

**ವಿಶೇಷ ಸೂಚನೆ** : ಈ ಕಾರ್ಯಕ್ರಮದ ವರದಿಗೆ ಆಗಮಿಸುವ ಪತ್ರಕರ್ತರಿಗೆ ವಾಹನ ವ್ಯವಸ್ಥೆ ಮಾಡಲಾಗಿದ್ದು, ವಾಹನವು ಅಂದು ಬೆಳಗ್ಗೆ 9-15 ಕ್ಕೆ ವಾರ್ತಾ ಸೌಧ, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ, ನಂ.17, ಭಗವಾನ್ ಮಹಾವೀರ ರಸ್ತೆ, (ಇನ್‌ಫೆಂಟ್ರಿ ರಸ್ತೆ) ಬೆಂಗಳೂರು-560 001. ದಿಂದ ಹೊರಡಲಿದೆ. ಪತ್ರಕರ್ತರು ಸರಿಯಾದ ಸಮಯಕ್ಕೆ ಹಾಜರಾಗಲು ಕೋರಿದೆ.

ಹೆಚ್ಚಿನ ಮಾಹಿತಿಗೆ ಮೊಬೈಲ್ ಸಂಖ್ಯೆ: 9480841209 ಸಂಪರ್ಕಿಸಬಹುದು.

**ಪತ್ರಿಕಾ ಪ್ರಕಟಣೆ**

ಸಂಖ್ಯೆ 231/531

# ಕನ್ನಡ ಕಲಿಸುವಂತ ವಾತವರಣ ನಿರ್ಮಾಣ ಮಾಡುವುದು ಪ್ರತಿ ಕನ್ನಡಿಗನ ಜವಬ್ಧಾರಿ–ಮುಖ್ಯಮಂತ್ರಿ ಸಿದ್ದರಾಮಯ್ಯ

ಬೆಂಗಳೂರು, ನವೆಂಬರ್ 01, ( ಕರ್ನಾಟಕ ವಾರ್ತೆ) :

ಪ್ರಸ್ತುತ ಸನ್ನೀವೇಷದಲ್ಲಿ ಕರ್ನಾಟಕದಲ್ಲಿರುವ ಅನ್ಯಭಾಷಿಕರಿಗೆ ಕನ್ನಡ ಕಲಿಸುವಂತಹ ವಾತಾವರಣವನ್ನು ನಿರ್ಮಾಣ ಮಾಡುವಂತದ್ದು ಪ್ರತಿ ಕನ್ನಡಿಗನ ಜವಬ್ಧಾರಿ, ಪ್ರತಿಯೊಬ್ಬ ಕನ್ನಡಿಗ ಈ ಕುರಿತು ಸಂಕಲ್ಪ ಮಾಡಬೇಕು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಕರೆ ನೀಡಿದರು.

ಇಂದು ಸಾರ್ವಜನಿಕ ಶಿಕ್ಷಣ ಇಲಾಖೆ ಕಂಠೀರವ ಕ್ರೀಡಾಂಗಣದಲ್ಲಿ ಹಮ್ಮಿಕೊಂಡಿದ್ದ 62ನೇ ಕರ್ನಾಟಕ ರಾಜ್ಯೋತ್ಸವ ಸಮಾರಂಭ ಮತ್ತು ಮಕ್ಕಳ ಮೇಳ–2017 ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಅವರು ನಾನು ಯಾವುದೇ ಭಾಷೆಯ ವಿರೋಧಿಯಲ್ಲ, ಕರ್ನಾಟಕದಲ್ಲಿ ವಾಸ ಮಾಡುವ ಪ್ರತಿಯೊಬ್ಬರು ಕೂಡ ಕನ್ನಡವನ್ನು ಕಲಿಯಬೇಕು ಹಾಗೂ ಕನ್ನಡವನ್ನು ಗೌರವಿಸಬೇಕು. ಇಂತಹ ವಾತಾವರಣವನ್ನು ನಿರ್ಮಿಸುವ ಅಗತ್ಯವಿದೆ ಎಂದು ಹೇಳಿದರು.

ಪೋಷಕರಿಗೆ ಇಂಗ್ಲೀಷ್ ಭಾಷೆ ಕುರಿತು ಹೆಚ್ಚಿನ ವ್ಯಾಮೋಹವಿದೆ, ಅದು ಒಳ್ಳೆಯ ಪ್ರವೃತ್ತಿಯಲ್ಲ. ಮಾತೃ ಭಾಷೆಯಲ್ಲಿ ಕಲಿತಾಗ ಮಾತ್ರ ಅರ್ಥ ಮಾಡಿಕೊಳ್ಳುವುದಕ್ಕೂ ಹಾಗೂ ಅಭಿವ್ಯಕ್ತಿ ಪಡಿಸಲಿಕ್ಕೂ ಸುಲಭ. ಮಾತೃ ಭಾಷೆ ಕನ್ನಡದಲ್ಲಿ ಕಲಿತು ಸರ್.ಎಂ.ವಿಶ್ವೇಶ್ವರಯ್ಯ ಅವರು ಜಗತ್ಪ್ರಸಿದ್ಧ ಇಂಜಿನೀಯರ್ ಆದರು, ಕನ್ನಡದಲ್ಲಿ ಕಲಿತ ಸಿ.ಎನ್.ಆರ್.ರಾವ್ ವಿಜ್ಞಾನಿಯಾದರು, ತಾವು ಸಹ ಕನ್ನಡ ಮಾಧ್ಯಮದಲ್ಲಿ ಕಲಿತು ಇಂದು ಮುಖ್ಯಮಂತ್ರಿಗಳಾಗಿದ್ದು ಎಂದು ಉದಾಹರಣೆ ಸಮೇತ ಮಾತನಾಡಿದರು.

ಸುಪ್ರಿಂ ಕೋರ್ಟ್ ಪೋಷಕರಿಗೆ ತಮ್ಮ ಮಕ್ಕಳ ಕಲಿಕಾ ಭಾಷೆಯನ್ನು ಆಯ್ಕೆ ಮಾಡಿಕೊಳ್ಳುವ ಅವಕಾಶ ನೀಡಿ ಆದೇಶ ನೀಡಿದೆ, ಈ ಕುರಿತು ಸಂವಿಧಾನಕ್ಕೆ ತಿದ್ದುಪಡಿ ತರಲು ಹಾಗೂ ಪ್ರಾದೇಶಿಕ ಭಾಷೆಗಳಿಗೆ ಶಿಕ್ಷಣದಲ್ಲಿ ಹೆಚ್ಚಿನ ಮಹತ್ವ ಸಿಗಲು ಪ್ರಧಾನ ಮಂತ್ರಿಗಳಿಗೆ ಈಗಾಗಲೇ ಎರಡು ಪತ್ರಗಳನ್ನು ಬರೆದಿದ್ದು ಮತ್ತೇ ಇನ್ನೊಂದು ಪತ್ರವನ್ನು ಶೀಘ್ರದಲ್ಲಿ ಬರೆಯುತ್ತೇನೆ.

ಸರಕಾರಿ ಪ್ರಾಥಮಿಕ ಶಾಲೆಗಳಿಗೆ ತಮ್ಮ ಮಕ್ಕಳನ್ನು ಸೇರಿಸಲು ಹಿಂಜರಿಯುವ ಪೋಷಕರು ಉನ್ನತ ಶಿಕ್ಷಣಕ್ಕಾಗಿ ಸರಕಾರಿ ಸಂಸ್ಥೆಗಳಲ್ಲಿ ಸೀಟು ಗಿಟ್ಟಿಸಿಕೊಳ್ಳಲು ಆತೊರೆಯುತ್ತಾರೆ. ಇಂದು ಪ್ರತಿ ಮಕ್ಕಳಿಗೂ ಸಮಾನ ಶಿಕ್ಷಣ ಸಿಗಬೇಕು ಎಂಬ ಆಶಯದೊಂದಿಗೆ ಸರ್ಕಾರ ಹತ್ತು ಸಾವಿರ ಶಿಕ್ಷಕರಿಗೆ ಇಂಗ್ಲೀಷ್ ಭಾಷೆಯ ಕುರಿತು ತರಬೇತಿ ಹಾಗೂ ಐವತ್ತು ಸಾವಿರ ಶಿಕ್ಷಕರಿಗೆ ಹೊಸ ಮಾಧರಿ ಶಿಕ್ಷಣ ಕುರಿತು ತರಬೇತಿ ನೀಡಲಾಗುತ್ತಿದೆ.

ಕನ್ನಡದ ಭಾಷೆ 2000ಕ್ಕೂ ಹೆಚ್ಚು ವರ್ಷಗಳ ಇತಿಹಾಸ ಜೊತೆಗೆ ತನ್ನದೇ ಲಿಪಿಯನ್ನು ಹೊಂದಿರುವ ಭಾಷೆ, ನನಗೆ ಕನ್ನಡದ ಬಗ್ಗೆ ಪ್ರೀತಿ, ಅಭಿಮಾನ ಮತ್ತು ಕಾಳಜಿ ಇದೆ ಹಾಗೆಯೇ ನಾನು ಇತರೆ ಭಾಷೆಗಳ ದ್ವೇಷಿಯಲ್ಲ. ಅದಕ್ಕಾಗಿ ಕರ್ನಾಟಕದಲ್ಲಿರುವ ಎಲ್ಲಾ ಶಾಲೆಗಳಲ್ಲಿ ಕೂಡ ಕನ್ನಡ ಒಂದು ಕಡ್ಡಾಯ ಭಾಷೆಯನ್ನಾಗಿ ಕಲಿಸಲು ಆದೇಶ ಹೊರಡಿಸಲಾಗಿದೆ.

ಕನ್ನಡಕ್ಕಾಗಿ, ಕನ್ನಡ ಶಾಲೆಗಳ ಅಭಿವೃದ್ಧಿಗಾಗಿ ಹಲವು ಕಾರ್ಯಕ್ರಮಗಳನ್ನು ಸರ್ಕಾರ ಹಮ್ಮಿಕೊಂಡಿದೆ. ಇತ್ತೀಚಿಗೆ ಕನ್ನಡ ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರು ಖಾಸಗಿ ಶಾಲೆಯೊಂದರಲ್ಲಿ ಕನ್ನಡ ಮಾತನಾಡಿದರೆ ಐದು ನೂರು ರೂ. ದಂಡ ಹಾಕಲಾಗುತ್ತಿದೆ ಎಂದು ತಮ್ಮ ಗಮನಕ್ಕೆ ತಂದಿದ್ದಾರೆ. ಈ ರೀತಿಯ ಶಾಲೆಗಳ ವಿರುದ್ಧ ಕಠಿಣ ಕ್ರಮ ತೆಗೆದುಕೊಳ್ಳಲಾಗುವುದು ಎಂದು ತಿಳಿಸಿದರು.

ಕನ್ನಡ ಕಲಿಸುವ ವಾತಾವರಣ ನಿರ್ಮಾಣಕ್ಕಾಗಿ ಹಾಗೂ ಪೋಷಕರಲ್ಲಿ ಕನ್ನಡದ ಅಭಿಮಾನದ ಜಾಗೃತಿಗಾಗಿ ಸರ್ಕಾರ ವಿಶೇಷ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲು ಯೋಜಿಸಲಾಗುತ್ತಿದೆ. ಯಾವುದೇ ಕಾರಣಕ್ಕೂ ಸರ್ಕಾರಿ ಶಾಲೆಗಳನ್ನು ಮುಚ್ಚಲು ಬಿಡುವುದಿಲ್ಲ. ಕರ್ನಾಟಕದಲ್ಲಿ ವಾಸಿಸುವ ಪ್ರತಿಯೊಬ್ಬರಿಗೂ ಕನ್ನಡ ರಾಜ್ಯೋತ್ಸವ ಶುಭಾಷಯಗಳು ಎಂದು ಹೇಳಿದರು.

ಈ ಸಮಯದಲ್ಲಿ ಮುಖ್ಯಮಂತ್ರಿಗಳು ಸಾರ್ವಜನಿಕ ಶಿಕ್ಷಣ ಇಲಾಖೆ ಅಂತರಜಾಲದಲ್ಲಿ ನೂತನವಾಗಿ ಆರಂಭಿಸಿರುವ 'ಕನ್ನಡ ಸೌರಭ' ಇ-ಲರ್ನಿಂಗ್ ಉಚಿತ ಡೌನ್‌ಲೋಡ್ ಮಾಡಿಕೊಳ್ಳಬಹುದಾದ ಹಾಗೂ ಕನ್ನಡದಲ್ಲಿರುವ ಕನ್ನಡ ಕಲಿಕೆ ಕಡ್ಡಾಯ ಇ ಕಲಿಕೆ ಸರಳ ಉಪಾಯ ಪೇಜನ್ನು ಉದ್ಘಾಟಿಸಿದರು.

ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ, ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ಔಕಾಫ್ ಸಚಿವ ತನ್ವೀರ್ ಸೇಠ್ ಅವರು ಪ್ರಾಸ್ತಾವಿಕವಾಗಿ ಮಾತನಾಡಿ ಕನ್ನಡ ಕುರಿತಂತೆ ಸರ್ಕಾರ ತೆಗೆದುಕೊಂಡಿರುವ ನಿರ್ಧಾರಗಳಲ್ಲಿ ಈ ವರ್ಷ ಅತ್ಯಂತ ಪ್ರಮುಖವಾದದ್ದು. ಕನ್ನಡ ಕಡ್ಡಾಯ ಶಿಕ್ಷಣ ಜಾರಿ, ಕನ್ನಡದ ಭಾವುಟದ ಬಗ್ಗೆ ಸರ್ಕಾರ ತೋರ್ಪಡಿಸಿದ ಬದ್ಧತೆ ಸೇರಿದಂತೆ ಕರ್ನಾಟಕದಲ್ಲಿ ಕನ್ನಡಕ್ಕಾಗಿ ಸರ್ಕಾರ ಹಲವು ಯೋಜನೆ ಹಾಗೂ ಅಧಿಸೂಚನೆಗಳನ್ನು ಜಾರಿಗೊಳಿಸಿದೆ.

ಸರ್ಕಾರಿ ಶಾಲೆಗಳಲ್ಲಿ ಶಿಕ್ಷಣವನ್ನು ಉತ್ತಮಗೊಳಿಸಲು ಹಾಗೂ ಹೆಚ್ಚಿನ ಮಕ್ಕಳನ್ನು ಆಕರ್ಷಿಸಲು ಹಲವು ಯೋಜನೆಗಳನ್ನು ಸರ್ಕಾರ ಹಮ್ಮಿಕೊಂಡಿದೆ. ದೃಶ್ಯ ಮಾಧ್ಯಮದ ಮೂಲಕ ಕಲಿಕೆಗಾಗಿ ಕ್ರಮ ಕೈಗೊಳ್ಳಲಾಗುತ್ತಿದೆ. ಮಕ್ಕಳಿಗೆ ಈಗಾಗಲೇ ನೀಡುತ್ತಿರುವ ಕೆನೆಭರಿತ ಹಾಲಿನ ಬದಲಾಗಿ ಸುವಾಸನೆ ಭರಿತ ಹಾಲನ್ನು ನೀಡಲು ಇಂದಿನಿಂದ ಮೈಸೂರು ಮತ್ತು ರಾಯಚೂರು ಜಿಲ್ಲೆಗಳಲ್ಲಿ ಪ್ರಾಯೋಗಿಕವಾಗಿ ಯೋಜನೆಯನ್ನು ಆರಂಭಿಸಲಾಗುವುದು.

ಮಕ್ಕಳಿಗೆ ನೀಡುವ ಸಮವಸ್ತ್ರಗಳನ್ನು ರಾಜ್ಯದ ನೇಕಾರರಿಂದ ಖರೀದಿಸಲು ಈಗಾಗಲೇ ಸೂಕ್ತ ಕ್ರಮವನ್ನು ಕೈಗೊಂಡಿದ್ದು, 8000 ನೇಕಾರರಿಂದ ಮುಂದಿನ ಮೂರು ವರ್ಷಗಳಿಗೆ ಮಕ್ಕಳಿಗೆ ಸಮವಸ್ತ್ರ ಖರೀದಿಸಲು ಒಪ್ಪಂದ ಮಾಡಿಕೊಳ್ಳಲು ಸರ್ಕಾರ ಮುಂದಾಗಿದೆ ಎಂದು ತಿಳಿಸಿದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ನಗರಾಭಿವೃದ್ಧಿ ಮತ್ತು ಹಜ್ ಸಚಿವ ಆರ್. ರೋಷನ್ ಬೇಗ್ ಅವರು ವಹಿಸಿದ್ದರು. ಮುಖ್ಯ ಅತಿಥಿಗಳಾಗಿ ಬೆಂಗಳೂರು ನಗರಾಭಿವೃದ್ಧಿ ಹಾಗೂ ನಗರ ಯೋಜನೆ ಸಚಿವ ಕೆ.ಜೆ.ಜಾರ್ಜ್, ವಿಧಾನಪರಿಷತ್ ಸದಸ್ಯ ಗೋವಿಂದರಾಜು ಹಾಗೂ ಸರ್ಕಾರದ ಪ್ರಧಾನ ಕಾರ್ಯದರ್ಶಿ ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಇಲಾಖೆಯ ಡಾ.ಶಾಲಿನಿ ರಜನೀಶ್ ಅವರು ಉಪಸ್ಥಿತರಿದ್ದರು.

**ಕಣ್ಮನ ಸೆಳೆದ ಕನ್ನಡದ ಮಕ್ಕಳ ಸಾಂಸ್ಕೃತಿಕ ಕಾರ್ಯಕ್ರಮಗಳು:**

ವಿವಿಧ ಶಾಲೆಗಳ ಸಾವಿರಾರು ಮಕ್ಕಳು ಇಂದು ಹಮ್ಮಿಕೊಂಡಿದ್ದ ರಾಜ್ಯೋತ್ಸವ ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು. ರಾಷ್ಟ್ರಗೀತೆ, ನಾಡಗೀತೆ, ರೈತಗೀತೆ ಸೇರಿದಂತೆ ಹಲವು ಹಾಡುಗಳನ್ನು ಗುಂಪಾಗಿ ಹಾಡಿದ ವಿವಿಧ ಶಾಲೆಗಳ ಮಕ್ಕಳು ನೆರೆದವರ ಕಣ್ಮನ ಸೆಳೆದರು.

ಒಟ್ಟು 80 ಶಾಲೆಗಳ ಮಕ್ಕಳಿಂದ ವಿವಿಧ ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ಪ್ರದರ್ಶಿಸಲಾಯಿತು. ಅದರಲ್ಲಿ ಮುಖ್ಯವಾಗಿ 2000 ಮಕ್ಕಳಿಂದ ಸಾಧರ ಪಡಿಸಿದ 'ಭಾರತೀಯಂ' (ಲಯಬದ್ಧ ಕವಾಯತು) ಕಾರ್ಯಕ್ರಮ ಜನರನ್ನು ಆಕರ್ಷಿಸಿತು. ಪಥ ಸಂಚಲನದಲ್ಲಿ 13 ಶಾಲೆಗಳು ಹಾಗೂ ವಾದ್ಯವೃಂದದಲ್ಲಿ 5 ಶಾಲೆಗಳ ಮಕ್ಕಳಿಗೆ ಅವಕಾಶ ನೀಡಲಾಗಿತ್ತು.

ಸಂಖ್ಯೆ 232/532

## ಹೆಗ್ಗಡ ದೇವನ ಕೋಟೆಯ ಶಾಸಕ ಚಿಕ್ಕಮಾದು ಅವರ ನಿಧನಕ್ಕೆ ಮುಖ್ಯಮಂತ್ರಿ ಕಂಬನಿ

**ಬೆಂಗಳೂರು, ನವೆಂಬರ್ 1 ( ಕರ್ನಾಟಕ ವಾರ್ತೆ) :**

ಹೆಗ್ಗಡ ದೇವನ ಕೋಟೆಯ ಶಾಸಕ ಚಿಕ್ಕಮಾದು ಅವರ ನಿಧನಕ್ಕೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಕಂಬನಿ ಮಿಡಿದಿದ್ದಾರೆ.

ಮೊದಲು ನಾಯಕ ಜನಾಂಗದ ನಾಯಕರಾಗಿ ಹೊರಹೊಮ್ಮಿದ ಚಿಕ್ಕಮಾದು ಅವರು ನಂತರದ ದಿನಗಳಲ್ಲಿ ಎಲ್ಲಾ ಸಮುದಾಯಗಳ ನಾಯಕರಾಗಿ ಜನ ನಾಯಕರಾಗಿ ಹೊರ ಹೊಮ್ಮಿದ್ದು ಇದೀಗ ಇತಿಹಾಸ. ಎಲ್ಲರೊಡನೆ ಪ್ರೀತಿ–ವಿಶ್ವಾಸ ಗಳಿಸಿ, ಎಲ್ಲರ ಸಹಕಾರ ಪಡೆದು ಅಭಿವೃದ್ಧಿಯ ಹಾದಿಯಲ್ಲಿ ಮುನ್ನಡೆಯುತ್ತಿದ್ದ ಚಿಕ್ಕಮಾದು ಅವರು ಅವಿಭಜಿತ ಮೈಸೂರು ಜಿಲ್ಲೆಯಲ್ಲಿ ಪ್ರಭಾವೀ ನಾಯಕರಾಗಿ ಬೆಳೆದಿದ್ದರು. ನಾಲ್ಕೂವರೆ ವರ್ಷಗಳ ಹಿಂದೆ ನಾನು ಮುಖ್ಯಮಂತ್ರಿಯಾಗಿ ಅಧಿಕಾರ ಸ್ವೀಕರಿಸಿದ ಸಂದರ್ಭದಲ್ಲಿ ನನ್ನನ್ನು ಅಭಿಮಾನದಿಂದ ಅಭಿನಂದಿಸಿದ ನೆನಪು ನನ್ನಲ್ಲಿ ಹಚ್ಚ ಹಸಿರಾಗಿರುವಾಗಲೇ ಚಿಕ್ಕಮಾದು ಅವರು ಇದೀಗ ನಮ್ಮನ್ನು ಅಗಲಿ ಇತಿಹಾಸ ಪುಟಗಳನ್ನು ಸೇರಿದ್ದಾರೆ ಎಂಬ ಕಟು ವಾಸ್ತವ ನನ್ನನ್ನು ಘಾಸಿಗೊಳಿಸಿದೆ ಎಂದು ಸಿದ್ದರಾಮಯ್ಯ ಅವರು ಬಣ್ಣಿಸಿದ್ದಾರೆ.

ಚಿಕ್ಕಮಾದು ಅವರ ಆತ್ಮಕ್ಕೆ ಶಾಂತಿ ಲಭಿಸಲಿ. ಚಿಕ್ಕಮಾದು ಅವರ ಅಗಲಿಕೆಯಿಂದ ಉಂಟಾದ ದುಃಖ ಮತ್ತು ನೋವು ಭರಿಸುವ ಶಕ್ತಿಯನ್ನು ಅವರ ಕುಟುಂಬ ವರ್ಗ ಹಾಗೂ ಅಭಿಮಾನಿ ವರ್ಗಕ್ಕೆ ಭಗವಂತನು ದಯಪಾಲಿಸಲಿ ಎಂದು ಮುಖ್ಯಮಂತ್ರಿ ತಮ್ಮ ಸಂದೇಶದಲ್ಲಿ ತಿಳಿಸಿದ್ದಾರೆ.

***********

ಡಿ ಪಿ ಎಂ

ಸಂಖ್ಯೆ 233/533

ಅರವತ್ತೆರಡನೇ ಕನ್ನಡ ರಾಜ್ಯೋತ್ಸವದ ಸುಸಂರ್ಭದಲ್ಲಿ
ಆಕಾಶವಾಣಿಯಲ್ಲಿ ಪ್ರಸಾರವಾದ
ಸನ್ಮಾನ್ಯ ಮುಖ್ಯಮಂತ್ರಿಯವರ ಸಂದೇಶ
01-11-2017 / ಬೆಳಿಗ್ಗೆ 8-30 ಗಂಟೆ / ಆಕಾಶವಾಣಿ, ಬೆಂಗಳೂರು

---

**ಆತ್ಮೀಯ ನಾಡ ಬಾಂಧವರೆ,**

1. **ಸರ್ವರಿಗೂ 62 ನೇ ಕರ್ನಾಟಕ ರಾಜ್ಯೋತ್ಸವದ ಶುಭಾಶಯಗಳು**

2. **ಭಾರತಕ್ಕೆ ಸ್ವಾತಂತ್ರ್ಯ ದೊರೆತಿದ್ದು 1947 ರಲ್ಲಿ. ಭಾರತವು ಗಣರಾಜ್ಯವಾದದ್ದು 1950 ರಲ್ಲಿ. ಅಂತೆಯೇ, ಭಾಷಾವಾರು ಪ್ರಾಂತ್ಯಗಳ ರಚನೆಯಾದದ್ದು 1956 ರಲ್ಲಿ. ಕನ್ನಡಿಗರೆಲ್ಲರೂ ಸಾಂಸ್ಕೃತಿಕವಾಗಿ ಹಾಗೂ ಭಾವನಾತ್ಮಕವಾಗಿ ಸಂಪೂರ್ಣವಾಗಿ ಒಂದಾಗಿ 61 ವರ್ಷಗಳು ಪೂರ್ಣಗೊಂಡಿವೆ.**

3. ಕನ್ನಡ ಎಂದರೆ ಕೇವಲ ವರ್ಣಮಾಲೆಯಲ್ಲ, ಅದು ಕನ್ನಡದ ಜನ, ನೆಲ, ಜಲ, ಬದುಕು, ಸಾಹಿತ್ಯ, ಸಂಸ್ಕೃತಿ, ಕಲೆ, ಸಂಗೀತ ಎಲ್ಲವನ್ನೂ ಒಳಗೊಂಡ ಕನ್ನಡತನ. ಕರ್ನಾಟಕದ ನೆಲದಲ್ಲಿ ವಾಸಿಸುತ್ತಿರುವವರೆಲ್ಲರೂ ಕನ್ನಡಿಗರು ಎಂದು ನಾವು ತಿಳಿದುಕೊಂಡಿದ್ದೇವೆ ಮತ್ತು ಹಾಗೆಯೇ ನಡೆದುಕೊಂಡಿದ್ದೇವೆ. ಇದಕ್ಕಾಗಿಯೇ ಇದು ಕನ್ನಡ ರಾಜ್ಯದ ಉತ್ಸವ. ಕನ್ನಡಿಗರ ಉತ್ಸವ.

4. ಕನ್ನಡ ಎನ್ನುವುದು ನನಗೆ ರಾಜಕೀಯ ಅಲ್ಲ. ನಾನು ಹುಟ್ಟು ಕನ್ನಡ ಪ್ರೇಮಿ. ಕನ್ನಡ ಕಾವಲು ಸಮಿತಿ ಅಧ್ಯಕ್ಷನಾಗಿ ರಾಜಕೀಯ ಜೀವನ ಪ್ರಾರಂಭಿಸಿದ್ದ ನಾನು ಅಲ್ಲಿಂದ ಇಲ್ಲಿಯ ವರೆಗೆ ನಾಡು-ನುಡಿ ಬಗ್ಗೆ ರಾಜೀಮಾಡಿಕೊಂಡಿಲ್ಲ. ಭಾಷೆ, ನೆಲ, ಜಲಕ್ಕೆ ಸಂಬಂಧಿಸಿದ ಪ್ರಶ್ನೆ ಎದುರಾದಾಗ ನಮ್ಮೆಲ್ಲರದ್ದು ಒಂದೇ ಪಕ್ಷ.

5. ಕನ್ನಡ ಅಭಿಜಾತ ಭಾಷೆ. ಜಗತ್ತಿನಲ್ಲಿ ಅತ್ಯುತ್ತಮ ಸಾಹಿತ್ಯ ಸಂಪತ್ತನ್ನು ಹೊಂದಿರುವ ಕೆಲವೇ ಭಾಷೆಗಳಲ್ಲಿ ಕನ್ನಡವೂ ಒಂದು. ಇದಕ್ಕೆ ಎರಡು ಸಾವಿರ ವರ್ಷಗಳಿಗೂ ಹೆಚ್ಚಿನ ಇತಿಹಾಸವಿದೆ.

6. ನಮ್ಮ ಪಕ್ಷ ಅಧಿಕಾರಕ್ಕೆ ಬಂದ ಮೇಲೆ ಕನ್ನಡಕ್ಕೆ ಸಂಬಂಧಿಸಿದಂತೆ ನಾನು ರಾಜಕೀಯ ಲಾಭ-ನಷ್ಟದ ಕಡೆ ಯೋಚನೆ ಮಾಡದೆ ಕನ್ನಡ ಪ್ರೇಮಿಯಾಗಿಯೇ ನಿರ್ಧಾರ ಕೈಗೊಂಡಿದ್ದೇನೆ.

7. ರಾಜ್ಯ ಲೋಕಸೇವಾ ಆಯೋಗದ ಪರೀಕ್ಷೆಗಳಲ್ಲಿ ಕನ್ನಡ ಮಾಧ್ಯಮದ ವಿದ್ಯಾರ್ಥಿಗಳಿಗೆ ಶೇಕಡಾ ಐದರಷ್ಟು ಮೀಸಲಾತಿ, ಖಾಸಗಿ ಕ್ಷೇತ್ರದ ಉದ್ಯಮಗಳಲ್ಲಿಯೂ ಸಿ ಮತ್ತು ಡಿ ವರ್ಗದ ನೌಕರರ ನೇಮಕಾತಿಯಲ್ಲಿ ಕನ್ನಡಿಗರಿಗೆ ನೂರಕ್ಕೆ ನೂರರಷ್ಟು ಉದ್ಯೋಗ ಮೀಸಲಾತಿ, ಸಿಬಿಎಸ್‌ಇ, ಐಸಿಎಸ್‌ಇ ಶಾಲೆಗಳು ಸೇರಿದಂತೆ ಎಲ್ಲಾ ಇಂಗ್ಲೀಷ್ ಮಾಧ್ಯಮದ ಶಾಲೆಗಳಲ್ಲಿ ಒಂದನೇ ತರಗತಿಯಿಂದಲೇ ಕನ್ನಡ ಭಾಷೆ ಕಲಿಕೆ ಕಡ್ಡಾಯಗೊಳಿಸುವ ಭಾಷಾ ನೀತಿ ಜಾರಿ, ಗ್ರಾಮೀಣ ಬ್ಯಾಂಕುಗಳ ನೇಮಕಾತಿ ಪರೀಕ್ಷೆಗಳನ್ನು ಕನ್ನಡದಲ್ಲಿಯೇ ನಡೆಸಲು ಕ್ರಮ,

8. ರಾಷ್ಟ್ರೀಕೃತ, ಗ್ರಾಮೀಣ ಮತ್ತು ಷೆಡ್ಯೂಲ್ಡ್ ಬ್ಯಾಂಕಗಳ ಸಿಬ್ಬಂದಿ ಕಡ್ಡಾಯವಾಗಿ ಕನ್ನಡ ಕಲಿಯುವಂತೆ ಸೂಚಿಸಿ ಸುತ್ತೋಲೆ, ಚಲನಚಿತ್ರ ಮಂದಿರಗಳಲ್ಲಿ ಕನ್ನಡ ಸಿನೆಮಾ ಪ್ರದರ್ಶನ ಕಡ್ಡಾಯಗೊಳಿಸಿ ಆದೇಶ, ಗುಣಮಟ್ಟದ ಕನ್ನಡ ಸಿನಿಮಾಗಳಿಗೆ ಸಹಾಯಧನವನ್ನು 125 ಸಿನಿಮಾಗಳಿಗೆ ಹೆಚ್ಚಳ, ಕನ್ನಡೇತರರಿಗೆ ಕನ್ನಡ ಕಲಿಸಲು ಬೆಂಗಳೂರು ನಗರದಲ್ಲಿ ಕನ್ನಡ ಕಲಿಕಾ ಕೇಂದ್ರಗಳ ಪ್ರಾರಂಭ – ಇವು ಇತ್ತೀಚೆಗೆ ರಾಜ್ಯ ಸರ್ಕಾರ ಕೈಗೊಂಡಿರುವ ಪ್ರಮುಖ ಕನ್ನಡಪರ ನಿರ್ಧಾರಗಳು.

9. ಪ್ರತಿಯೊಂದು ರಾಜ್ಯದ ರಾಜ್ಯಭಾಷೆಯು ಆ ನೆಲದ ಸಾರ್ವಭೌಮ ಭಾಷೆ. ಇದನ್ನು ಸಂವಿಧಾನ ಅಂಗೀಕರಿಸಿದೆ. ಮಾನ್ಯ ಮಾಡಿದೆ. ಮತ್ತೊಂದು ಭಾಷೆ ಆ ನೆಲದ ಬದುಕಿನ ಮೇಲೆ ಆಧಿಪತ್ಯವನ್ನು ಮೆರೆಯುವುದು ಭಾಷಾವಾರು ಪ್ರಾಂತ್ಯ ರಚನೆಯ ನೀತಿಗೆ ವಿರುದ್ಧವಾದುದು. ಸಂವಿಧಾನವೂ ಇದನ್ನು ಒಪ್ಪುವುದಿಲ್ಲ. ಸ್ಥಳೀಯತ್ವವನ್ನು ಉಳಿಸಿಕೊಂಡೇ ಅರ್ಥಾತ್ ಸ್ಥಳೀಯ ಭಾಷೆಯ ಸ್ವಾಯತ್ತತೆಯನ್ನು ಉಳಿಸಿಕೊಂಡೇ ಅನ್ಯಭಾಷೆಗಳನ್ನು ಕಲಿಯುವುದಕ್ಕೆ ಅವಕಾಶ ಕೊಡಬೇಕಾದ್ದು ಒಕ್ಕೂಟ ವ್ಯವಸ್ಥೆಯೊಳಗಿನ ನೀತಿ ಸಂಹಿತೆ ಇದನ್ನೇ ನಮ್ಮ ಸರ್ಕಾರ ಪಾಲಿಸುತ್ತಾ ಬಂದಿದೆ.

10. ಇಂಗ್ಲೀಷ್ ಇಲ್ಲವೆ ಹಿಂದಿ ಭಾಷೆಗೆ ನಮ್ಮ ವಿರೋಧ ಖಂಡಿತ ಇಲ್ಲ. ಆದರೆ ಕನ್ನಡದ ಬೆಲೆ ತೆತ್ತು ಬೇರೆ ಭಾಷೆಗಳ ಹೇರಿಕೆಯನ್ನು ನಾವು ಒಪ್ಪುವುದಿಲ್ಲ. ಮೆಟ್ರೋ ರೈಲ್ವೆ ನಿಲ್ದಾಣಗಳಲ್ಲಿ

**ಹಿಂದಿ ಭಾಷೆ ಹೇರಿಕೆ ವಿರುದ್ಧ ಕನ್ನಡ ಸಂಘಟನೆಗಳು ದನಿ ಎತ್ತಿದಾಗ ಸ್ಪಂದಿಸಿದ ರಾಜ್ಯ ಸರ್ಕಾರ ಕೇಂದ್ರ ಸರ್ಕಾರದ ಜತೆ ವ್ಯವಹರಿಸಿ ಅಲ್ಲಿ ಕನ್ನಡ ಮತ್ತು ಇಂಗ್ಲೀಷ್‌ಗಳ ದ್ವಿ–ಭಾಷಾ ನೀತಿ ಜಾರಿಗೊಳಿಸಿತು.**

11. ನಮ್ಮ ಸರ್ಕಾರ, ರಾಜ್ಯ ಧ್ವಜ ಬೇಕೆಂಬ ಜನಾಭಿಪ್ರಾಯದ ಪರವಾಗಿ ಇದೆ. ಈ ಬೇಡಿಕೆಯನ್ನು ಮನ್ನಿಸಿ ಅದರ ಪರಿಶೀಲನೆಗಾಗಿ ತಜ್ಞರ ಸಮಿತಿಯನ್ನು ರಚಿಸಿದೆ. ಶೀಘ್ರದಲ್ಲಿಯೇ ಆ ಬಗ್ಗೆ ಅಧಿಕೃತ ನಿರ್ಧಾರ ಕೈಗೊಳ್ಳಲಾಗಿದೆ.

12. ಇಂದು ಕನ್ನಡ ಭಾಷೆ ಅಷ್ಟೇ ಅಲ್ಲ ಎಲ್ಲಾ ಪ್ರಾದೇಶಿಕ ಭಾಷೆಗಳು ಬಹುದೊಡ್ಡ ಆತಂಕಗಳನ್ನು ಎದುರಿಸುತ್ತಿವೆ. ಇತ್ತೀಚೆಗೆ ಸುಪ್ರೀಂ ಕೋರ್ಟ್ ಕೂಡಾ ಮಗು ಯಾವ ಭಾಷೆಯಲ್ಲಿ ಕಲಿಯಬೇಕೆಂಬ ತೀರ್ಮಾನ ಪಾಲಕರಿಗೆ ಸೇರಿದ್ದು ಎಂಬ ತೀರ್ಪು ನೀಡಿದೆ. ಇದು ಕೇವಲ ಕನ್ನಡ ಭಾಷೆಗೆ ಮಾತ್ರವಲ್ಲ ನಮ್ಮ ಇಡೀ ಸಮಾಜದ ರಚನೆಗೆ ಬಂದಿರುವ ಕುತ್ತು ಎನ್ನುವುದನ್ನು ನಾವು ತಿಳಿದುಕೊಳ್ಳಬೇಕು.

13. ಸಂವಿಧಾನದ ಆಶಯದಂತೆ ಆರು ವರ್ಷದಿಂದ 14 ವರ್ಷ ವಯೋಮಾನದ ಮಕ್ಕಳಿಗೆ ಆ ಮಕ್ಕಳ ಒಳಿತಿಗಾಗಿ  ಅಗತ್ಯವಾದ ಎಲ್ಲಾ ವಿವೇಚನಾಪೂರ್ವಕ ಕ್ರಮಗಳನ್ನು ಕೈಗೊಳ್ಳುವ ನಿಟ್ಟಿನಲ್ಲಿ ಸೂಕ್ತ ಕಾನೂನು ರೂಪಿಸಿ ಉಚಿತ ಹಾಗೂ ಕಡ್ಡಾಯ ಶಿಕ್ಷಣವನ್ನು ನೀಡಬೇಕಾಗಿರುವುದು ರಾಜ್ಯದ ಜವಾಬ್ದಾರಿಯಾಗಿದೆ. ಈ ನಿಟ್ಟಿನಲ್ಲಿ ಮಾತೃ ಭಾಷೆಯಲ್ಲಿಯೇ ಪ್ರಾಥಮಿಕ ಶಿಕ್ಷಣವನ್ನು ಜಾರಿಗೊಳಿಸಲು ರಾಷ್ಟ್ರವ್ಯಾಪೀ ಅಭಿಪ್ರಾಯ ರೂಪಿಸಿ ರಾಷ್ಟ್ರೀಯ ಶಿಕ್ಷಣ ನೀತಿಯನ್ನು ಜಾರಿಗೆ ತರಬೇಕೆಂಬುದು ಕೇಂದ್ರ ಸರ್ಕಾರಕ್ಕೆ ನಮ್ಮ ಸರ್ಕಾರದ ಒತ್ತಾಯವಾಗಿದೆ.

14. ನಮ್ಮ ಸರ್ಕಾರವು ಈ ನಿಟ್ಟಿನಲ್ಲಿ ಶಿಕ್ಷಣ ತಜ್ಞರು, ಬುದ್ದಿಜೀವಿಗಳು, ಸಾಹಿತಿಗಳು ಹಾಗೂ ಕಾನೂನು ಪಂಡಿತರ ಸಭೆ ನಡೆಸಿ, ಅಭಿಪ್ರಾಯ ಸಂಗ್ರಹಿಸಿದೆ. ಈ ಹಿನ್ನೆಲೆಯಲ್ಲಿ ಎಲ್ಲಾ ರಾಜ್ಯಗಳ ಮುಖ್ಯಮಂತ್ರಿಗಳ ಸಭೆಯನ್ನು ಆಯೋಜಿಸಿ ಸಂವಿಧಾನಕ್ಕೆ ಸೂಕ್ತ ತಿದ್ದುಪಡಿ ತರಲು ಪ್ರಧಾನ ಮಂತ್ರಿ ಅವರಿಗೆ ಎರಡು ಬಾರಿ ಪತ್ರ ಬರೆದಿದ್ದೇನೆ. ಆದರೆ, ಈ ಪತ್ರಗಳಿಗೆ ಈವರೆಗೂ ಪ್ರಧಾನಮಂತ್ರಿಯವರಿಂದ ಯಾವುದೇ ಸ್ಪಂದನೆ ದೊರೆತಿಲ್ಲ

15. ಕಲಿಕೆ ಎಂಬುದು ಕಲಿಯುವ ಮಕ್ಕಳ ಆಯ್ಕೆಯಾಗಿಲ್ಲ. ಬದಲಾಗಿ ಪಾಲಕ–ಪೋಷಕರ ಆಯ್ಕೆಯಾಗಿದೆ. ಆಂಗ್ಲ ಭಾಷಾ ಶಾಲೆಗಳಲ್ಲಿ ಕಲಿತರೆ ಮಾತ್ರ ಬದುಕು ಮತ್ತು ಭವಿಷ್ಯ ಎಂಬ ಹುಸಿ ನಂಬಿಕೆ ಪಾಲಕ–ಪೋಷಕರಲ್ಲಿ ಮನೆ ಮಾಡಿರುವುದು ಭಾಷಾ ಮಾಧ್ಯಮದ ಅನುಷ್ಠಾನಕ್ಕೆ ಗಾಯದ ಮೇಲೆ ಬರೆ ಎಳೆದಂತಾಗಿದೆ.

16. ಕನ್ನಡ ಮಾಧ್ಯಮದಲ್ಲಿ ವ್ಯಾಸಂಗ ಮಾಡಿದ ಭಾರತ ರತ್ನ ಸರ್ ಎಂ. ವಿಶ್ವೇಶ್ವರಯ್ಯ ಅವರು ವಿಶ್ವ ವಿಖ್ಯಾತ ಇಂಜಿನಿಯರ್. ಕನ್ನಡ ಮಾಧ್ಯಮದಲ್ಲೇ ವಿದ್ಯಾಭ್ಯಾಸ ಮಾಡಿದ ಭಾರತ ರತ್ನ ಸಿ. ಎನ್. ಆರ್. ರಾವ್ ಅವರು ವಿಶ್ವ ವಿಖ್ಯಾತ ವಿಜ್ಞಾನಿ.

17. ಕನ್ನಡ ಮಾಧ್ಯಮದಲ್ಲೇ ಕಲಿತ ನಾನೂ ಕೂಡಾ ಈ ರಾಜ್ಯದ ಮುಖ್ಯಮಂತ್ರಿಯಾಗಿದ್ದೇನೆ. ಆದಕಾರಣ, ಕನ್ನಡ ಮಾಧ್ಯಮದಲ್ಲಿ ವ್ಯಾಸಂಗ ಮಾಡಿದರೆ ಅವಕಾಶಗಳಿಲ್ಲ, ಭವಿಷ್ಯವೇ ಇಲ್ಲ ಎಂಬ ಮಾತನ್ನು ನಾನು ಒಪ್ಪುವುದಿಲ್ಲ.

18. ಇವೆಲ್ಲದರ ಬಗ್ಗೆಯೂ ಗಂಭೀರ ಚಿಂತನೆ ನಡೆಸಿರುವ ನಮ್ಮ ಸರ್ಕಾರ ಪ್ರಾಥಮಿಕ ಶಾಲೆಗಳಲ್ಲಿ ಆಂಗ್ಲ ಭಾಷೆಯನ್ನು ಒಂದು ವಿಷಯವನ್ನಾಗಿ ಬೋಧಿಸಲು ಐದು ಸಾವಿರ ಶಿಕ್ಷಕರಿಗೆ ದೀರ್ಘಾವಧಿ ತರಬೇತಿ ನೀಡಿ ಸರ್ಕಾರಿ ಶಾಲೆಗಳಲ್ಲಿ ಉತ್ತಮ ಗುಣಮಟ್ಟದ ಶಿಕ್ಷಣವನ್ನು ನೀಡಲು ನಮ್ಮ ಸರ್ಕಾರ ಈಗಾಗಲೇ ಕ್ರಮ ಕೈಗೊಂಡಿದೆ.

19. ಮಧ್ಯಾಹ್ನದ ಬಿಸಿಯೂಟ ಯೋಜನೆಯನ್ನು ಮುಂದುವರೆಸುವುದರೊಂದಿಗೆ ನಲವತ್ತು ಲಕ್ಷಕ್ಕೂ ಹೆಚ್ಚು ಅಂಗನವಾಡಿ ಮಕ್ಕಳೂ ಸೇರಿದಂತೆ ಒಂದರಿಂದ ಹತ್ತನೇ ತರಗತಿಯಲ್ಲಿ ವ್ಯಾಸಂಗ ಮಾಡುತ್ತಿರುವ ರಾಜ್ಯದ ಒಂದು ಕೋಟಿಗೂ ಹೆಚ್ಚು ಮಕ್ಕಳಿಗೆ ವಾರಕ್ಕೆ ಐದು ಬಾರಿ ಕುಡಿಯಲು ಹಾಲು ಕೊಡುವ ಕ್ಷೀರ ಭಾಗ್ಯ ಯೋಜನೆಯನ್ನು ಜಾರಿಗೆ ತಂದಿದ್ದೇವೆ. ಈ ಯೋಜನೆಯ

ಪರಿಣಾಮಕಾರಿ ಅನುಷ್ಠಾನದಿಂದ ಮಕ್ಕಳಲ್ಲಿನ ಪೌಷ್ಠಿಕತೆ ವೃದ್ಧಿಸಿದೆ. ಹಾಜರಾತಿ ಪ್ರಮಾಣದಲ್ಲೂ ಗಣನೀಯ ಏರಿಕೆ ಉಂಟಾಗಿದೆ.

20. ಒಂದರಿಂದ ಹತ್ತನೇ ತರಗತಿಯಲ್ಲಿ ವ್ಯಾಸಂಗ ಮಾಡುತ್ತಿರುವ ಎಲ್ಲಾ ಮಕ್ಕಳಿಗೂ ವಿದ್ಯಾ ವಿಕಾಸ ಯೋಜನೆಯಡಿಯಲ್ಲಿ ಕಾಲು ಚೀಲ ಮತ್ತು ಬೂಟುಗಳನ್ನು ಒಳಗೊಂಡಂತೆ ಉಚಿತ ಸಮವಸ್ತ್ರ, ಮಧ್ಯಾಹ್ನದ ಬಿಸಿಯೂಟ, ಪಠ್ಯ ಪುಸ್ತಕಗಳ ವಿತರಣೆ ಮಾಡಲಾಗುತ್ತಿದೆ.

21. ಆಧುನಿಕ ವಿಜ್ಞಾನವನ್ನು ನಮ್ಮ ಭಾಷೆಯಲ್ಲಿ ಕಲಿಸುವುದು ಹಾಗೂ ಕಲಿಯುವುದು ಸಾಧ್ಯ ಇಲ್ಲ ಎನ್ನುವುದು ಅವೈಜ್ಞಾನಿಕ ಅಭಿಪ್ರಾಯ. ಕನ್ನಡ ಭಾಷೆ ಬೆಳೆಯಬೇಕಾದರೆ ಬೇರೆ ಬೇರೆ ಜ್ಞಾನ ಶಿಸ್ತುಗಳಲ್ಲಿ ತೊಡಗಿಸಿಕೊಂಡ ಪಂಡಿತರು, ವಿದ್ವಾಂಸರು ಕನ್ನಡ ಭಾಷೆಯ ಬಗ್ಗೆ ಇಚ್ಛಾಶಕ್ತಿಯನ್ನು ಬೆಳೆಸಿಕೊಳ್ಳಬೇಕು. ಜ್ಞಾನಕ್ಷೇತ್ರಕ್ಕೆ ಸಂಬಂಧಿಸಿದ ಹೊರ ಪರಿಭಾಷೆಯನ್ನು ಕಂಡು ಕೊಳ್ಳಬೇಕು. ಕನ್ನಡದ ಜ್ಞಾನ ಸಂಪತ್ತು, ಕನ್ನಡ ಶಬ್ದ ಸಂಪತ್ತು ಮತ್ತಷ್ಟು ಬೆಳೆಯಬೇಕು.

**22. ವೈದ್ಯಕೀಯ ಕ್ಷೇತ್ರದಲ್ಲಿ ತೊಡಗಿರುವ ಅನೇಕ ವೈದ್ಯರು ಕನ್ನಡದಲ್ಲಿ ಬರೆಯುತ್ತಿದ್ದಾರೆ. ಆದರೆ ತಂತ್ರಜ್ಞರು, ಎಂಜಿನಿಯರ್‌ಗಳು, ವಕೀಲರು ಈ ವಿಷಯದಲ್ಲಿ ಹೆಚ್ಚಿನ ಆಸಕ್ತಿ ತೋರುತ್ತಿಲ್ಲ. ಕನ್ನಡದಲ್ಲಿ ತಂತ್ರಜ್ಞಾನವನ್ನು ಹೇಳಲಿಕ್ಕೆ ಬರುವುದಿಲ್ಲ ಎನ್ನುವ ಪೂರ್ವ ನಿರ್ಧಾರಿತ ಅಭಿಪ್ರಾಯದಿಂದ ಅವರು ಹೊರಬರಬೇಕು.**

**23. ಇಲ್ಲಿಯ ವರೆಗಿನ ಕನ್ನಡದ ಅಭಿವೃದ್ಧಿ ಎದುರಿಸಿದ ತೊಡಕುಗಳು, ಮುಂದಿರುವ ಸವಾಲುಗಳು ಹಾಗೂ ಮುಂದೆ ಆಗಬೇಕಾಗಿರುವ ಕೆಲಸಗಳನ್ನು ಗಮನದಲ್ಲಿಟ್ಟುಕೊಂಡು ವೈಜ್ಞಾನಿಕವಾದ ಮತ್ತು ಜನಪರವಾದ ಭಾಷಾ ನೀತಿಯೊಂದನ್ನು ರೂಪಿಸುವ ಅಗತ್ಯ ಇದೆ. ಆದ್ದರಿಂದ ಬದಲಾಗುತ್ತಿರುವ ಕಾಲಮಾನ ಹಾಗೂ ಬದಲಾಗುತ್ತಿರುವ ಅಗತ್ಯಗಳನ್ನು ನೆನಪಲ್ಲಿಟ್ಟು ಕೊಂಡು ಈ ನೀತಿಯನ್ನು ರೂಪಿಸಬೇಕಾಗುತ್ತದೆ.**

**24. ರಾಜ್ಯ ಸರ್ಕಾರ ತನ್ನ ಆಡಳಿತದಲ್ಲಿ ಕನ್ನಡವನ್ನು ಬಳಸುವುದಕ್ಕೆ ಬದ್ಧವಾಗಿದೆ. ಮಂತ್ರಿಮಂಡಲದ ನಿರ್ಣಯಗಳು, ಮಂತ್ರಿಗಳ ಟಿಪ್ಪಣಿಗಳು, ವಿಧಾನ ಸಭೆಯ ಮುಂದೆ ಬರುವ ವಿಧೇಯಕಗಳು ಕನ್ನಡದಲ್ಲೇ ಇದ್ದುಬಿಟ್ಟರೆ ಕನ್ನಡ ಅನಿವಾರ್ಯವಾಗಿ ಆಡಳಿತದಲ್ಲಿ ನೆಲೆಗೊಳ್ಳುವಂತಾಗುತ್ತದೆ ಎನ್ನುವುದು ನನ್ನ ಸ್ಪಷ್ಟ ಅಭಿಪ್ರಾಯ.**

**25.** **ಕನ್ನಡವನ್ನು ಉಳಿಸಿ ಬೆಳೆಸುವುದು ಚುನಾಯಿತ ಸರ್ಕಾರದ ಕರ್ತವ್ಯ ಎನ್ನುವುದನ್ನು ನಾನು ಸಂಪೂರ್ಣವಾಗಿ ಒಪ್ಪಿಕೊಳ್ಳುತ್ತೇನೆ. ಆದರೆ, ಇದು ಸಾಧ್ಯವಾಗಬೇಕಾದರೆ ಕನ್ನಡಿಗರಾದ ತಮ್ಮೆಲ್ಲರ ಸಹಕಾರ ಅಗತ್ಯ. ಭಾಷೆ ಬೆಳೆಯಬೇಕಾದರೆ ಅದನ್ನು ಬಳಸಬೇಕಾಗುತ್ತದೆ.**

**26.** **ಕನ್ನಡಿಗರೆಲ್ಲರೂ ದಿನನಿತ್ಯದ ವ್ಯವಹಾರದಲ್ಲಿ ಕನ್ನಡವನ್ನು ಕಡ್ಡಾಯವಾಗಿ ಬಳಸುತ್ತೇವೆ ಎಂದು ಸಂಕಲ್ಪ ಮಾಡಿದರೆ ಕನ್ನಡದ ಸ್ಥಾನಮಾನ ಅಜರಾಮರವಾಗಿ ಉಳಿಯಲಿದೆ. ಆ ಸಂಕಲ್ಪವನ್ನು ತಾವು ಮಾಡುತ್ತೀರಿ ಎಂಬ ನಂಬಿಕೆ ಮತ್ತು ವಿಶ್ವಾಸ ನನ್ನಲ್ಲಿದೆ.**

27. **ತಮ್ಮೆಲ್ಲರಿಗೂ ಮತ್ತೊಮ್ಮೆ ಕರ್ನಾಟಕ ರಾಜ್ಯೋತ್ಸವದ** ಶುಭಾಶಯಗಳನ್ನು ಸಲ್ಲಿಸುತ್ತೇನೆ.

**ಜೈ ಹಿಂದ್ ! ಜೈ ಕರ್ನಾಟಕ !!**

************